ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಮಾಹಿತಿ ಕುರಿತು

ಶ್ರೀ ಎಸ್. ವ್ಹಿ. ಸಂಕನೂರ(ಪದವೀಧರರ ಕ್ಷೇತ್ರ) -

14 (60) ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯವು ಗದಗದಲ್ಲಿ ಯಾವ ವರ್ಷ ಪ್ರಾರಂಭವಾಗಿದೆ; ಈ ವಿಶ್ವವಿದ್ಯಾಲಯದಲ್ಲಿ ಎಷ್ಟು ವಿವಿಧ ಕೋರ್ಸ್‌ಗಳು ಪ್ರಾರಂಭವಾಗಿದೆ; ಸದ್ಯ ವಿವಿಧ ಕೋರ್ಸ್‌ಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ಈ ವಿಶ್ವವಿದ್ಯಾಲಯಕ್ಕೆ ವಿಭಾಗವಾರು ಮಂಜೂರಾದ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು;

(ಇ) ಸದರಿ ವಿಶ್ವವಿದ್ಯಾಲಯದಲ್ಲಿ ಖಾಯಂ/ಗುತ್ತಿಗೆ ಆಧಾರದ ಮೇಲೆ ವಿಭಾಗವಾರು ನೇಮಕಗೊಂಡ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಜಾತಿವಾರು ಮಾಹಿತಿ ನೀಡುವುದು;

(ಈ) ವಿಶ್ವವಿದ್ಯಾಲಯದ ವಿವಿಧ ಕೋರ್ಸ್‌ಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಗ್ರಾಮೀಣಾಭಿವೃದ್ದಿ ಪಂಚಾಯತ್‌ರಾಜ್ ಇಲಾಖೆಯಡಿ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುವಾಗ ಆಧ್ಯತೆ ನೀಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ?